Akashvani : Bangalore
National Bulletin In Kannada
22.02.2025 : 7.35AM
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
22.02.2025 : 7.35AM

******

ಮುಖ್ಯಾಂಶಗಳು :

1. ಭಾರತೀಯ ಭಾಷೆಗಳು ತಮ್ಮೊಂದಿಗೆ ಪರಸ್ಪರ ಭಾಷೆಗಳನ್ನೂ ಶ್ರೀಮಂತಗೊಳಿಸಿವೆ - ಪ್ರಧಾನಿ ನರೇಂದ್ರ ಮೋದಿ
2. ಸುಸ್ಥಿರ ಅಭಿವೃದ್ಧಿ ಒಂದು ಆಯ್ಕೆಯಲ್ಲದೆ, ನಮಗಿರುವ ಏಕೈಗ ಮಾರ್ಗ - ಉಪರಾಷ್ಟ್ರಪತಿ ಜಗದೀಪ್ ಧನಕರ್
3. ನವದೆಹಲಿಯಲ್ಲಿಂದು ಪುಸಾ ಕೃಷಿ ವಿಜ್ಞಾನ ಮೇಳಕ್ಕೆ ಕೇಂದ್ರ ಸಚಿವ ಶಿವರಾಜ್ ಸಿಂಗ್ ಚವ್ಹಾಣ್ ಚಾಲನೆ
4. ಪ್ರಯಾಗ್‌ರಾಜ್ ಮಹಾಕುಂಭಮೇಳ; ತ್ರಿವೇಣಿ ಸಂಗಮದಲ್ಲಿ ೫೯ ಕೋಟಿಗೂ ಅಧಿಕ ಭಕ್ತಾದಿಗಳ ಅಮೃತಸ್ನಾನ
5. ಡಬ್ಲೂಪಿಎಲ್ ಕ್ರಿಕೆಟ್; ರಾಯಲ್ ಚಾಲೆಂಜರ್ಸ್ ಬೆಂಗಳೂರು ವಿರುದ್ಧ ಮುಂಬೈ ಇಂಡಿಯನ್ಸ್‌ಗೆ ೪ ವಿಕೆಟ್‌ಗಳ ಜಯ

*******

ಪ್ರಧಾನಿ ನರೇಂದ್ರ ಮೋದಿ ನವದೆಹಲಿಯಲ್ಲಿ ನಿನ್ನೆ ೯೮ ನೇ ಅಖಿಲ ಭಾರತೀಯ ಮರಾಠಿ ಸಾಹಿತ್ಯ ಸಮ್ಮೇಳನವನ್ನು ಉದ್ಘಾಟಿಸಿದರು. ಈ ವೇಳೆ ಮಾತನಾಡಿದ ಅವರು, ಮರಾಠಿ ಭಾಷೆ ಮತ್ತು ಮರಾಠಿ ಸಾಹಿತ್ಯವು ಸಮಾಜದ ತುಳಿತಕ್ಕೊಳಗಾದ ಮತ್ತು ವಂಚಿತ ವರ್ಗಗಳಿಗೆ ಒಳಿತಾಗುವಂತೆ, ಗಮನಾರ್ಹ ಕಾರ್ಯವನ್ನು ನಿರ್ವಹಿಸಿದೆ ಎಂದರು. ಭಾರತೀಯ ಭಾಷೆಗಳ

ನಡುವೆ ಎಂದಿಗೂ ಯಾವುದೇ ದ್ವೇಷವಿರಲಿಲ್ಲ; ಬದಲಾಗಿ, ಅವು ಪರಸ್ಪರ, ತಮ್ಮೊಂದಿಗೆ ಇತರ ಭಾಷೆಗಳನ್ನು ಶ್ರೀಮಂತಗೊಳಿಸಿವೆ ಎಂದು ಪ್ರಧಾನಿ ಮೋದಿ ತಿಳಿಸಿದರು.

ಧ್ವನಿ - ಪಿಎಂ

*******

ಆಕಾಶವಾಣಿಯ ಜನಪ್ರಿಯ ಮಾಸಿಕ 'ಮನ್ ಕಿ ಬಾತ್' ಕಾರ್ಯಕ್ರಮದಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿ, ನಾಳೆ ಭಾನುವಾರ ಬೆಳಗ್ಗೆ ೧೧ ಗಂಟೆಗೆ ದೇಶ-ವಿದೇಶಗಳಲ್ಲಿರುವ ಭಾರತೀಯರೊಂದಿಗೆ ತಮ್ಮ ಮನದ ಮಾತನ್ನು ಹಂಚಿಕೊಳ್ಳಲಿದ್ದಾರೆ. ಇದು 'ಮನ್ ಕಿ ಬಾತ್' ಕಾರ್ಯಕ್ರಮದ ೧೧೯ನೇ ಆವೃತ್ತಿಯಾಗಿದೆ. ಈ ಕಾರ್ಯಕ್ರಮ ಆಕಾಶವಾಣಿ ಮತ್ತು ದೂರದರ್ಶನದ ಎಲ್ಲ ವಾಹಿನಿಗಳು, ಎಐಆರ್ ನ್ಯೂಸ್ ಜಾಲತಾಣ, ನ್ಯೂಸ್ ಆನ್ ಏರ್ ಮೊಬೈಲ್ ಆಪ್‌ನಲ್ಲಿ ಬಿತ್ತರಗೊಳ್ಳಲಿದೆ. ಅಲ್ಲದೇ, ಎಐಆರ್ ನ್ಯೂಸ್, ಡಿಡಿ ನ್ಯೂಸ್, ಪ್ರಧಾನಮಂತ್ರಿ ಕಾರ್ಯಾಲಯ ಹಾಗೂ ಮಾಹಿತಿ ಮತ್ತು ಪ್ರಸಾರ ಸಚಿವಾಲಯದ ಯೂಟ್ಯೂಬ್ ವಾಹಿನಿಗಳಲ್ಲಿ ನೇರ ಪ್ರಸಾರವಾಗಲಿದೆ. ಹಿಂದಿ ಅವತರಣಿಕೆಯ ನಂತರ ಪ್ರಾದೇಶಿಕ ಭಾಷೆಯಲ್ಲಿ ಕಾರ್ಯಕ್ರಮ ಪ್ರಸಾರವಾಗಲಿದೆ.

*******

ಸುಸ್ಥಿರ ಅಭಿವೃದ್ಧಿ ಇನ್ನು ಮುಂದೆ ಒಂದು ಆಯ್ಕೆಯಲ್ಲ, ಬದಲಾಗಿ ನಾವು ಹೊಂದಿರುವ ಏಕೈಕ ಮಾರ್ಗ ಎಂದು ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್ ತಿಳಿಸಿದ್ದಾರೆ. ನವದೆಹಲಿಯಲ್ಲಿ ನಿನ್ನೆ ನಡೆದ ೨೧ ನೇ ಆಫ್ರಿಕನ್-ಏಷ್ಯನ್ ಗ್ರಾಮೀಣ ಅಭಿವೃದ್ಧಿ ಸಂಸ್ಥೆಯ ಸಮ್ಮೇಳನದ ಉದ್ಘಾಟನಾ ಸಮಾರಂಭವನ್ನುದ್ದೇಶಿಸಿ ಮಾತನಾಡಿದ ಅವರು, ಸುಸ್ಥಿರ ಅಭಿವೃದ್ಧಿಯ ಅಡಿಪಾಯವನ್ನು ಗ್ರಾಮೀಣ ವಲಯದ ಸಹಾಯದಿಂದ ಹಾಕಬಹುದು ಎಂದು ಹೇಳಿದರು. ಜಾಗತಿಕ ದಕ್ಷಿಣವನ್ನು ಜಾಗತಿಕ ವೇದಿಕೆಯಲ್ಲಿ ಮುನ್ನೆಲೆಗೆ ತರುವುದು ಪ್ರಧಾನಿ ನರೇಂದ್ರ ಮೋದಿಯವರ ದೃಷ್ಟಿಕೋನವಾಗಿದೆ ಎಂದು ಅವರು ಹೇಳಿದರು. ಕೃತಕ ಬುದ್ಧಿಮತ್ತೆ, ಮಷೀನ್ ಲರ್ನಿಂಗ್ ಮತ್ತು ಬ್ಲಾಕ್‌ಚೈನ್‌ನಂತಹ ತಂತ್ರಜ್ಞಾನಗಳ ಹೊರಹೊಮ್ಮುವಿಕೆ ಹಲವು ಸವಾಲುಗಳಿಗೆ ಎಡೆ

ಮಾಡಿಕೊಟ್ಟರೂ, ವಿವಿಧ ಅವಕಾಶಗಳನ್ನೂ ಒದಗಿಸುತ್ತವೆ ಎಂದು ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್ ತಿಳಿಸಿದರು.

*******

ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್ ಇಂದು ಮಹಾರಾಷ್ಟ್ರದ ಛತ್ರಪತಿ ಸಂಭಾಜಿನಗರಕ್ಕೆ ಒಂದು ದಿನದ ಪ್ರವಾಸ ಕೈಗೊಳ್ಳಲ್ಲಿದ್ದಾರೆ. ಈ ಭೇಟಿಯ ಸಮಯದಲ್ಲಿ ಅವರು ಡಾ. ಬಾಬಾಸಾಹೇಬ್ ಅಂಬೇಡ್ಕರ್ ಮರಾಠವಾಡ ವಿಶ್ವವಿದ್ಯಾಲಯದ ೬೫ ನೇ ಘಟಿಕೋತ್ಸವದ ಮುಖ್ಯ ಅತಿಥಿಯಾಗಿ ಅಧ್ಯಕ್ಷತೆ ವಹಿಸಲಿದ್ದಾರೆ. ಹಾಗೆಯೇ, ಸರಸ್ವತಿ ಭುವನ್ ಕಾಲೇಜಿನಲ್ಲಿ ಸಂವಿಧಾನ ಜಾಗೃತಿ ವರ್ಷ ಮತ್ತು ಅಮೃತ್ ಮಹೋತ್ಸವವನ್ನು ಉದ್ಘಾಟಿಸಲಿದ್ದಾರೆ. ಇದೇ ವೇಳೆ ಉಪರಾಷ್ಟ್ರಪತಿ ವಿಶ್ವವಿದ್ಯಾಲಯದಲ್ಲಿ 'ಪ್ರಧಾನ ಮಂತ್ರಿ ಉಚ್ಚತರ್ ಶಿಕ್ಷಾ ಅಭಿಯಾನ'ದ ಅಡಿಯಲ್ಲಿ ನಾಲ್ಕು ಹೊಸ ಕಟ್ಟಡಗಳಿಗೆ ಶಂಕುಸ್ಥಾಪನೆ ನೆರವೇರಿಸಲಿದ್ದಾರೆ. ತಮ್ಮ ಭೇಟಿಯ ಭಾಗವಾಗಿ, ಅವರು ಎಲ್ಲೋರಾದ ಘೃಷ್ಣೇಶ್ವರ ದೇವಸ್ಥಾನದಲ್ಲಿ ಪೂಜೆ ಸಲ್ಲಿಸಲಿದ್ದಾರೆ ಮತ್ತು ಎಲ್ಲೋರಾ ಗುಹೆಗಳಿಗೆ ಭೇಟಿ ನೀಡಲಿದ್ದಾರೆ.

*******

ಜಿ೨೦ ತನ್ನ ಮುಂದಾಳತ್ವವನ್ನು ಉಳಿಸಿಕೊಳ್ಳಲು, ಜಾಗತಿಕ ಸವಾಲುಗಳಿಗೆ ಸರಿಯಗಿ ಪ್ರತಿಕ್ರಿಯಿಸಬೇಕು ಎಂದು ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್ ತಿಳಿಸಿದ್ದಾರೆ. ದಕ್ಷಿಣ ಆಫ್ರಿಕಾದ ಜೋಹಾನ್ಸ್‌ಬರ್ಗ್‌ನಲ್ಲಿ ನಿನ್ನೆ ೨೦೨೫ ರ ಜಿ೨೦ ಉದ್ದೇಶಗಳ ಕುರಿತು ನಡೆದ ಜಿ-೨೦ ವಿದೇಶಾಂಗ ಸಚಿವರ ಸಭೆಯಲ್ಲಿ ಮಾತನಾಡಿದ ಅವರು, ಜಿ ೨೦ ಯಾವಾಗಲೂ ಸ್ಪರ್ಧೆಗಿಂತ ಸಹಯೋಗವನ್ನು ಉನ್ನತ ಸ್ಥಾನದಲ್ಲಿಡಬೇಕು ಎಂದು ಒತ್ತಿ ಹೇಳಿದರು. ನಿನ್ನೆ ಜೋಹಾನ್ಸ್‌ಬರ್ಗ್‌ನಲ್ಲಿ ನಡೆದ ಭಾರತ-ಆಸ್ಟ್ರೇಲಿಯಾ-ಫ್ರಾನ್ಸ್ ತ್ರಿಪಕ್ಷೀಯ ಸಭೆಯಲ್ಲಿ ಡಾ. ಎಸ್. ಜೈಶಂಕರ್ ಆಸ್ಟ್ರೇಲಿಯಾದ ವಿದೇಶಾಂಗ ಸಚಿವ ಪೆನ್ನಿ ವಾಂಗ್ ಮತ್ತು ಫ್ರೆಂಚ್ ವಿದೇಶಾಂಗ ಸಚಿವ ಜೀನ್-ನೋಯೆಲ್ ಬ್ಯಾರಟ್ ಅವರನ್ನು ಭೇಟಿಯಾದರು.

*******

ಬುಡಕಟ್ಟು ಸಮುದಾಯದ ಉನ್ನತಿ ಮತ್ತು ಸಬಲೀಕರಣ ಸರ್ಕಾರದ ಆದ್ಯತೆಯಾಗಿದೆ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ತಿಳಿಸಿದರು. ನವದೆಹಲಿಯ ಗುಜರಾತ್ ಭವನದಲ್ಲಿ ನಿನ್ನೆ ಗುಜರಾತ್‌ನ ಡಾಂಗ್ ಜಿಲ್ಲೆಯ ಸಂತೋಕ್ಬಾ ಧೋಲಕಿಯಾ ವಿದ್ಯಾ ಮಂದಿರದ ಗ್ರಾಮೀಣ ಮತ್ತು ಬುಡಕಟ್ಟು ಸಮುದಾಯದ ವಿದ್ಯಾರ್ಥಿಗಳೊಂದಿಗೆ ಶೈಕ್ಷಣಿಕ ಸಂವಾದ ನಡೆಸಿದರು. ಸಂವಾದದ ಸಮಯದಲ್ಲಿ, ಪ್ರಧಾನಿ ನರೇಂದ್ರ ಮೋದಿ ಅವರು ಸ್ವಾತಂತ್ರ್ಯದ ನಂತರ ಬುಡಕಟ್ಟು ಸಮುದಾಯಕ್ಕೆ ಅವರ ಸರಿಯಾದ ಮನ್ನಣೆಯನ್ನು ನೀಡಿದ್ದಾರೆ ಎಂದು ಅಮಿತ್ ಶಾ ಒತ್ತಿ ಹೇಳಿದರು.

*******

ನವದೆಹಲಿಯಲ್ಲಿಂದು ಆಯೋಜಿಸಲಾಗಿರುವ ಪುಸಾ ಕೃಷಿ ವಿಜ್ಞಾನ ಮೇಳ-೨೦೨೫ಕ್ಕೆ ಕೇಂದ್ರ ಕೃಷಿ ಮತ್ತು ರೈತರ ಕಲ್ಯಾಣ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಚಾಲನೆ ನೀಡಲಿದ್ದಾರೆ. ಉನ್ನತ ಕೃಷಿ - ವಿಕಸಿತ ಭಾರತ ಎಂಬುದು ಮೂರು ದಿನಗಳ ಈ ಮೇಳದ ವಿಷಯವಾಗಿದೆ. ಭಾರತೀಯ ಕೃಷಿ ಸಂಶೋಧನಾ ಸಂಸ್ಥೆ ಅಭಿವೃದ್ಧಿಪಡಿಸಿರುವ ವಿವಿಧ ತಂತ್ರಜ್ಞಾನ ಹಾಗೂ ಕೃಷಿ ಸಂಬಂಧಿ ವ್ಯವಸ್ಥೆಗಳ ನೇರ ಪ್ರಾತ್ಯಕ್ಷಿಕೆಗಳು ಈ ಮೇಳದ ಆಕರ್ಷಣೆಯಾಗಿದೆ.

*******

ಪ್ರಯಾಗರಾಜ್‌ನಲ್ಲಿರುವ ಮಹಾಕುಂಭದ ತ್ರಿವೇಣಿ ಸಂಗಮದಲ್ಲಿ ಇಲ್ಲಿಯವರೆಗೆ ೫೯ ಕೋಟಿ ೩೧ ಲಕ್ಷಕ್ಕೂ ಹೆಚ್ಚು ಭಕ್ತರು ಪವಿತ್ರ ಸ್ನಾನ ಮಾಡಿದ್ದಾರೆ. ಇಂದು ಕೇಂದ್ರ ಸಚಿವ ಮತ್ತು ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ. ನಡ್ಡಾ ಸಂಗಮದಲ್ಲಿ ಪವಿತ್ರ ಸ್ನಾನ ಮಾಡಿ ಪ್ರಾರ್ಥನೆ ಸಲ್ಲಿಸಲಿದ್ದಾರೆ. ಅವರೊಂದಿಗೆ ಉತ್ತರ ಪ್ರದೇಶ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಉಪಸ್ಥಿತರಿರಲಿದ್ದಾರೆ.

*******

ಭಾರತದ ಆರ್ಥಿಕ ಬೆಳವಣಿಗೆಯಲ್ಲಿ ಜಪಾನ್ ಪ್ರಮುಖ ಮಿತ್ರ ರಾಷ್ಟ್ರವಾಗಿದೆ ಮತ್ತು ವಿದೇಶಿ ಹೂಡಿಕೆಯ ೫ ನೇ ಅತಿದೊಡ್ಡ ಮೂಲವಾಗಿದೆ ಎಂದು ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ಹೇಳಿದ್ದಾರೆ. ನಿನ್ನೆ ನವದೆಹಲಿಯಲ್ಲಿ ನಡೆದ ಭಾರತ-ಜಪಾನ್ ಆರ್ಥಿಕತೆ

ಮತ್ತು ಹೂಡಿಕೆ ವೇದಿಕೆಯನ್ನುದ್ದೇಶಿಸಿ ಮಾತನಾಡಿದ ಅವರು, ೨೦೦೦ ರಿಂದ ೨೦೨೪ ರ ನಡುವೆ ಜಪಾನ್‌ನಿಂದ ವಿದೇಶಿ ನೇರ ಹೂಡಿಕೆ ೪೩ ಶತಕೋಟಿ ಡಾಲರ್‌ಗಳನ್ನು ಮೀರಿದೆ ಎಂದು ಹೇಳಿದರು.

***ಧ್ವನಿ ***ಪಿಯೂಷ್ ಗೋಯಲ್

*******

ವಿಶ್ವ ಧ್ವನಿ-ದೃಶ್ಯ ಮನರಂಜನಾ ಸಮ್ಮೇಳನ 'ವೇವ್ಸ್ ೨೦೨೫' ಮೇ ೧ ರಿಂದ ೪ ರವರಗೆ ಮುಂಬೈನಲ್ಲಿ ನಡೆಯಲಿದೆ ಎಂದು ಕೇಂದ್ರ ವಾರ್ತಾ ಮತ್ತು ಪ್ರಸಾರ ಸಚಿವಾಲಯ ತಿಳಿಸಿದೆ. ವೇವ್ಸ್ ಶೃಂಗಸಭೆಯು ಭಾರತವನ್ನು ಜಾಗತಿಕ ಮಾಧ್ಯಮ ಮತ್ತು ಮನರಂಜನಾ ಕೇಂದ್ರವಾಗಿ ಸ್ಥಾಪಿಸುವ ಪ್ರಮುಖ ಉಪಕ್ರಮ ಇದಾಗಿದ್ದು, ಮಾಧ್ಯಮ ಸಿಇಒ ಗಳು, ಮನರಂಜನಾ ವೃತ್ತಿಪರರು ಸೇರಿದಂತೆ ಪ್ರಮುಖ ಉದ್ಯಮ ವ್ಯಕ್ತಿಗಳನ್ನು ಒಟ್ಟುಗೂಡಿಸುತ್ತದೆ. ಜಾಗತಿಕ ಮನರಂಜನಾ ವಲಯದಲ್ಲಿ ಸಹಯೋಗ, ಹೂಡಿಕೆ ಮತ್ತು ತಾಂತ್ರಿಕ ಪ್ರಗತಿಯನ್ನು ಬೆಳೆಸುವ ಗುರಿಯನ್ನು ವೇವ್ಸ್ ಶೃಂಗಸಭೆ ಹೊಂದಿದೆ.

*******

ಬೆಂಗಳೂರಿನ ಎಂ.ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ನಿನ್ನೆ ನಡೆದ ಮಹಿಳಾ ಪ್ರೀಮಿಯರ್ ಲೀಗ್-ಡಬ್ಲೂಪಿಎಲ್ ಕ್ರಿಕೆಟ್ ಪಂದ್ಯಾವಳಿಯಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ವಿರುದ್ಧ ಮುಂಬೈ ಇಂಡಿಯನ್ಸ್ ತಂಡ ೪ ವಿಕೆಟ್‌ಗಳಿಂದ ಗೆಲುವು ಸಾಧಿಸಿದೆ. ಟಾಸ್ ಸೋತು ಮೊದಲು ಬ್ಯಾಟಿಂಗ್ ಮಾಡಿದ ಆರ್‌ಸಿಬಿ, ನಿಗದಿತ ೨೦ ಓವರ್‌ಗಳಲ್ಲಿ ೭ ವಿಕೆಟ್ ನಷ್ಟಕ್ಕೆ ೧೬೭ ರನ್ ಗಳಿಸಿತು. ೧೬೮ ರನ್‌ಗಳ ಗುರಿ ಬೆನ್ನತ್ತಿದ ಮುಂಬೈ ಇಂಡಿಯನ್ಸ್ ತಂಡ ೧೯.೫ ಓವರ್‌ಗಳಲ್ಲಿ ೬ ವಿಕೆಟ್ ನಷ್ಟಕ್ಕೆ ೧೭೦ ರನ್‌ಗಳಿಸಿ ಗೆಲುವು ತನ್ನದಾಗಿಸಿಕೊಂಡಿತು. ಬ್ಯಾಟಿಂಗ್ ಹಾಗೂ ಬೌಲಿಂಗ್‌ನಲ್ಲಿ ಅತ್ಯುತ್ತಮ ಪ್ರದರ್ಶನಕ್ಕಾಗಿ ಅಮನ್ ಜ್ಯೋತ್ ಕೌರ್‌ಗೆ ಪಂದ್ಯ ಶ್ರೇಷ್ಠ ಪ್ರಶಸ್ತಿ ನೀಡಲಾಯಿತು.

*******

ಒಡಿಶಾದ ಭುವನೇಶ್ವರದ ಕಳಿಂಗ ಹಾಕಿ ಕ್ರೀಡಾಂಗಣದಲ್ಲಿ ನಿನ್ನೆ ನಡೆದ ಎಫ್‌ಐಎಚ್ ಹಾಕಿ ಪ್ರೋ ಲೀಗ್ ಪಂದ್ಯದಲ್ಲಿ ಭಾರತದ ಪುರುಷರ ತಂಡ ಐರ್ಲೆಂಡ್ ತಂಡದ ವಿರುದ್ಧ ೩-೧ ಗೋಲುಗಳ ಅಂತರದಲ್ಲಿ ಗೆಲುವು ಸಾಧಿಸಿದೆ. ಭಾರತದ ಪರ ಮನ್‌ದೀಪ್ ಸಿಂಗ್, ಜರ್ಮನ್ ಪ್ರೀತ್ ಸಿಂಗ್, ಸುಖ್‌ಜೀತ್ ಸಿಂಗ್ ಗೋಲು ಗಳಿಸಿ, ತಂಡದ ಗೆಲುವಿನಲ್ಲಿ ಪ್ರಮುಖ ಪಾತ್ರವಹಿಸಿದರು. ಇಂದು ಇದೇ ಕ್ರೀಡಾಂಗಣದಲ್ಲಿ ನಡೆಯಲಿರುವ ಪಂದ್ಯದಲ್ಲಿ ಉಭಯ ತಂಡಗಳು ಮತ್ತೊಮ್ಮೆ ಮುಖಾಮುಖಿಯಾಗಲಿದ್ದು, ಪಂದ್ಯ ರಾತ್ರಿ ೭.೩೦ಕ್ಕೆ ಆರಂಭವಾಗಲಿದೆ. ೯ ಅಂಕಗಳೊಂದಿಗೆ ಭಾರತದ ಪುರುಷರ ತಂಡ ಅಂಕಪಟ್ಟಿಯಲ್ಲಿ ೫ನೇ ಸ್ಥಾನದಲ್ಲಿದೆ. ಮಹಿಳೆಯರ ವಿಭಾಗದಲ್ಲಿ ನಡೆದ ಪಂದ್ಯದಲ್ಲಿ ಭಾರತ, ಜರ್ಮನಿ ವಿರುದ್ಧ ೦-೪ ಗೋಲುಗಳ ಅಂತರದಲ್ಲಿ ಸೋಲನುಭವಿಸಿದೆ. ಇಂದು ಸಂಜೆ ೫.೧೫ಕ್ಕೆ ನಡೆಯಲಿರುವ ಪಂದ್ಯದಲ್ಲಿ ಉಭಯ ವನಿತೆಯರ ತಂಡಗಳು ಮುಖಾಮುಖಿಯಾಗಲಿವೆ.

*******

ಪಾಕಿಸ್ತಾನದ ಕರಾಚಿಯ ರಾಷ್ಟ್ರೀಯ ಕ್ರೀಡಾಂಗಣದಲ್ಲಿ ನಿನ್ನೆ ನಡೆದ ಐಸಿಸಿ ಚಾಂಪಿಯನ್ಸ್ ಟ್ರೋಫಿ ಕ್ರಿಕೆಟ್ ಪಂದ್ಯಾವಳಿಯ ಬಿ ಗುಂಪಿನ ಪಂದ್ಯದಲ್ಲಿ ಅಫ್ಘಾನಿಸ್ತಾನ ವಿರುದ್ಧ ದಕ್ಷಿಣ ಆಫ್ರಿಕಾ ತಂಡ ೧೦೭ ರನ್‌ಗಳ ಭರ್ಜರಿ ಜಯ ದಾಖಲಿಸಿದೆ. ಮೊದಲು ಬ್ಯಾಟಿಂಗ್ ಮಾಡಿದ ದಕ್ಷಿಣಾ ಆಫ್ರಿಕಾ ತಂಡ, ನಿಗದಿತ ೫೦ ಓವರ್‌ಗಳಲ್ಲಿ ೬ ವಿಕೆಟ್ ನಷ್ಟಕ್ಕೆ ೩೧೫ ರನ್ ಗಳಿಸಿತು. ೩೧೬ ರನ್‌ಗಳ ಗೆಲುವಿನ ಗುರಿ ಬೆನ್ನತ್ತಿದ ಆಫ್ಘಾನಿಸ್ತಾನ, ೪೩.೩ ಓವರ್‌ಗಳಲ್ಲಿ ತನ್ನೆಲ್ಲಾ ವಿಕೆಟ್ ಕಳೆದುಕೊಂಡು ೨೦೮ ರನ್ ಗಳಿಸಲಷ್ಟೇ ಶಕ್ತವಾಯಿತು. ದಕ್ಷಿಣ ಆಫ್ರಿಕಾದ ಪರ ಶತಕ ಸಿಡಿಸಿದ ರ‍್ಯಾನ್ ರಿಕೆಲ್ಟನ್ ಪಂದ್ಯಶ್ರೇಷ್ಠ ಪ್ರಶಸ್ತಿಗೆ ಭಾಜನರಾದರು. ಇಂದು ಲಾಹೋರ್‌ನಲ್ಲಿರುವ ಗದ್ದಾಫಿ ಕ್ರೀಡಾಂಗಣದಲ್ಲಿ ನಡೆಯಲಿರುವ ಬಿ ಗುಂಪಿನ ಪಂದ್ಯದಲ್ಲಿ ಆಸ್ಟ್ರೇಲಿಯಾ ಹಾಗೂ ಇಂಗ್ಲೆಂಡ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ಅಪರಾಹ್ನ ೨.೩೦ಕ್ಕೆ ಆರಂಭವಾಗಲಿದೆ.

******